- - ಓ ಎಸ್ ನಂ. 135/2019

ಪಿ.ಡಬ್ಲ್ಯೂ :1

ದಿನಾಂಕ : 17-04-2026 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದಃ

ನಿಪಿ -14 ರ ಪ್ರಕಾರ ಎ ಸಿ ನ್ಯಾಯಾಲಯದಲ್ಲಿ ಪ್ರಕರಣವನ್ನು ಕಾಲಮಿತಿಯಲ್ಲಿ ಇಲ್ಲ ಎಂಬ ಕಾರಣಕ್ಕೆ ವಜಾಗೊಳಿಸಲಾಗಿದೆ ಎಂದರೆ ಸರಿಯಲ್ಲ ,ಸಿವಿಲ್ ನ್ಯಾಯಾಲಯದಲ್ಲಿ ದಾವೆ ಇದೆ ಎಂಬ ಕಾರಣಕ್ಕೆ ವಜಾ ಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ . 1995-96 ನೇ ಸಾಲಿನಲ್ಲಿ ಕಾಳೇಗೌಡ ರವರ ಹೆಸರಿಗೆ ಖಾತೆಯಾಗಿದೆ ಎಂದರೆ ಅವರು ಮಾಡಿಕೊಂಡಿದ್ದಾರೆ ಎಂದು ಸಾಕ್ಷಿ ಹೇಳಿದ್ದಾರೆ . ಆ ಪ್ರಕಾರ ಖಾತೆಯಾದ 20-25 ವರ್ಷಗಳ ನಂತರ ಎ ಸಿ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಿದ್ದೀರಿ ಎಂದರೆ ಸಾಕ್ಷಿಯು 2019 ನೇ ಸಾಲಿನಲ್ಲಿ ವಿಚಾರ ತಿಳಿದಿತ್ತು, ಆ ಸಮಯ ಸಲ್ಲಿಸಿದ್ದೇನೆ ಎಂದು ತಿಳಿಸಿದ್ದಾರೆ . ದಾವಾ ಸ್ವತ್ತಿನಲ್ಲಿ ನಾವು ಸ್ವಾಧೀನ ಹೊಂದಿಲ್ಲ ಎಂದರೆ ಸರಿಯಲ್ಲ . ಪ್ರತಿವಾದಿಗಳಿಗೆ ತೊಂದರೆ ನೀಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ .

ಮರು ವಿಚಾರಣೆ ಇಲ್ಲ .

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓದಿ ಹೇಳಿ, ಕೇಳಿದೆ, ಸರಿ ಇದೆ, ಎಂದರು.

SD/-
(ಅನುಪಮ.ಡಿ. )
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ, ಗುಬ್ಬಿ .